ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1249
ಸದಸ್ಯರ ಹೆಸರು : ಎಸ್. ಎಲ್. ಧರ್ಮೇಗೌಡ
ಉತ್ತರಿಸಬೇಕಾದ ದಿನಾಂಕ : 20.12.2018
ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಪೂರೈಸುತ್ತಿರುವ ಆಹಾರವು ತೀರಾ ಕಳಪೆ ಮಟ್ಟದಾಗಿರುವುದಲ್ಲದೇ ನಿಗದಿತ ಸಮಯದಲ್ಲಿ ಪೂರೈಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ.
ಆ)	ಆಹಾರ ಕಳಪೆ ಮಟ್ಟದ್ದಾಗಿರಲು ಮತ್ತು ನಿಗದಿತ ಸಮಯದಲ್ಲಿ ಪೂರೈಸದಿರಲು ಕಾರಣಗಳೇನು; (ಮಾಹಿತಿ ನೀಡುವುದು)	ಗುಣ ಮಟ್ಟದ ಆಹಾರ ಸಾಮಗ್ರಿಗಳನ್ನು ನಿಗದಿತ ಸಮಯದಲ್ಲಿ ಪೂರೈಸಲಾಗುತ್ತಿದೆ.
ಇ)	ಹಾಗಿದ್ದಲ್ಲಿ, ಜಿಲ್ಲೆಯಲ್ಲಿರುವ ಅಂಗನವಾಡಿಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರ ವಿವರಗಳನ್ನು ತಾಲ್ಲೂಕುವಾರು ನೀಡುವುದು;	ಅಂಗನವಾಡಿ ಕೇಂದ್ರಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ. 1) ಎಂ.ಎಸ್.ಪಿ.ಟಿ.ಸಿ ಘಟಕ ತರೀಕೆರೆ ಇವರಿಂದ ತರೀಕೆರೆ ಮತ್ತು ಕಡೂರು ಶಿಶು ಅಭಿವೃದ್ಧಿ ಯೋಜನೆಗೆ. 2) ಎಂ.ಎಸ್.ಪಿ.ಟಿ.ಸಿ. ಘಟಕ ಕೊಪ್ಪ ಇವರಿಂದ ಕೊಪ್ಪ, ಶೃಂಗೇರಿ ಮತ್ತು ಎನ್.ಆರ್.ಪುರ ಶಿಶು ಅಭಿವೃದ್ಧಿ ಯೋಜನೆಗೆ. 3) ಎಂ.ಎಸ್.ಪಿ.ಟಿ.ಸಿ. ಘಟಕ ಚಿಕ್ಕಮಗಳೂರು ಇವರಿಂದ ಚಿಕ್ಕಮಗಳೂರು ಮತ್ತು ಮೂಡಿಗೆರೆ ಶಿಶು ಅಭಿವೃದ್ಧಿ ಯೋಜನೆಗೆ ಆಹಾರ ಸಾಮಗ್ರಿಗಳನ್ನು ಪಡೆಯಲಾಗುತ್ತಿದೆ.
ಈ)	ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರು ಆಹಾರ ಖರೀದಿಸುತ್ತಿರುವ ಆಹಾರ ಸಾಮಾಗ್ರಿಗಳ ಬೆಲೆಗೂ ಹಾಗೂ ಅಂದಿನ ಎ.ಪಿ.ಎಂ.ಸಿ. ಮಾರುಕಟ್ಟೆ ಬೆಲೆಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಮೇಲ್ವಿಚಾರಣಾ ಸಮಿತಿಯು ಎ.ಪಿ.ಎಂ.ಸಿ ದರವನ್ನು ಪಡೆದು ಈ ಸಗಟು ಮಾರಾಟ ದರಗಳಿಗೆ ಸಾಗಾಣಿಕೆ ವೆಚ್ಚ, ಎಂ.ಎಸ್.ಪಿ.ಟಿ.ಸಿ. ಗಳ ಲಾಭಾಂಶ, ಉತ್ಪಾದನಾ ವೆಚ್ಚ (ಶುಚಿಗೊಳಿಸುವುದು, ಪ್ಯಾಕಿಂಗ್), ವೇಸ್ಟೇಜ್, ಅನ್ವಯಿಸುವ ತೆರಿಗೆ ಇವುಗಳನ್ನು ಸೇರಿಸಿ ದರಗಳನ್ನು ನಿಗದಿಪಡಿಸಲಾಗುತ್ತಿದೆ.
ಉ)	ಹಾಗಿದ್ದಲ್ಲಿ, ಮಾರುಕಟ್ಟೆ ಬೆಲೆಗಿಂತ ಕಡಿಮೆ ದರದಲ್ಲಿ ಕಳಪೆ ಆಹಾರ ಸಾಮಗ್ರಿಗಳನ್ನು ಖರೀದಿಸಿ ಪೂರೈಸುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)	ಆಹಾರ ಪದಾರ್ಥಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಗುಣಮಟ್ಟದ ಬಗ್ಗೆ ವಿಶ್ಲೇಷಣೆಗೆ ಒಳಪಡಿಸಿ ಉತ್ತಮ ಆಹಾರ ಪದಾರ್ಥಗಳನ್ನು ಪಡೆಯಲಾಗುತ್ತಿದೆ.

ಸಂ:ಮಮಇ 361 ಐಸಿಡಿ 2018

(ಡಾ॥ ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.